ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಆಗು ನೀ ಅನಿಕೇತನ
BE BOUNDLESS
BENGALURU CITY UNIVERSITY
Central College Campus, Dr. AmbedkarVeedhi, Bengaluru,
E-mail ID: registrarevlubcu@gmail.com, Ph.No: 080-22295559

ಸಂಖ್ಯೆ: ಬೆಂ.ನ.ವಿ/ಪ.ವಿ/ಪರೀಕ್ಷಾ ಮೌಲ್ಯಮಾಪನ/ಯು.ಜಿ/2021-22/1452 ದಿನಾಂಕ 12-07-2021

# ಸುತ್ತೋಲೆ

**ವಿಷಯ: 2020-21ನೇ ಸಾಲಿನ ಮೂರನೇ ಸೆಮಿಸ್ಟರ್ ಪರೀಕ್ಷೆಗಳ ಮೌಲ್ಯಮಾಪನ ಕಾರ್ಯಕ್ಕೆ ಎಲ್ಲಾ ಅರ್ಹ ಅಧ್ಯಾಪಕರನ್ನು (ಅತಿಥಿ ಉಪನ್ಯಾಸಕರು ಸೇರಿದಂತೆ) ಕಳುಹಿಸಿಕೊಡುವ ಬಗ್ಗೆ.**

**ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ 12.07.2021**

****

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ತಮಗೆ ತಿಳಿಸುವುದೇನೆಂದರೆ, ಈಗಾಗಲೇ ಮಾರ್ಚ್/ಏಪ್ರೀಲ್ ತಿಂಗಳಲ್ಲಿ ನಡೆದಿರುವ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳ ತೃತೀಯ ಸೆಮಿಸ್ಟರಿನ ಮೌಲ್ಯಮಾಪನ ಕಾರ್ಯ ಆರಂಭಿಸಿ ಫಲಿತಾಂಶಗಳನ್ನು ಪ್ರಕಟಿಸಬೇಕಿದೆ. ಕೋವಿಡ್-19 ಪಿಡುಗನ್ನು ನಿಯಂತ್ರಿಸುವ ಸಲುವಾಗಿ ರಾಜ್ಯ ಸರ್ಕಾರದ ಆದೇಶದಂತೆ ಲಾಕ್‌ಡೌನ್ ಕಾರಣದಿಂದಾಗಿ ಇದುವರೆವಿಗೂ ಮೌಲ್ಯಮಾಪನ ಕಾರ್ಯವನ್ನು ಮುಂದೂಡಲಾಗಿತ್ತು.

ಈಗ ದಿನಾಂಕ 12.07.2021 ರಿಂದ ಮೌಲ್ಯಮಾಪನ ಕಾರ್ಯ ನಡೆಯಲಿದ್ದು, ತಾವು ತಪ್ಪದೆ ತಮ್ಮ ಕಾಲೇಜಿನ ಎಲ್ಲಾ ಅರ್ಹ ಅಧ್ಯಾಪಕರನ್ನು (ಅತಿಥಿ ಉಪನ್ಯಾಸಕರು ಸೇರಿದಂತೆ) ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಭಾಗವಹಿಸಲು ನಿರ್ದೇಶನ ನೀಡಬೇಕೆಂದು / ಸೂಚಿಸಬೇಕೆಂದು ಕೋರಲಾಗಿದೆ. ಎಲ್ಲಾ ಮೌಲ್ಯಮಾಪಕರು ಮೌಲ್ಯಮಾಪನ ಕಾರ್ಯಕ್ಕೆ ಬರುವಾಗ ಕಡ್ಡಾಯವಾಗಿ Face Mask ಧರಿಸಿ ಬರಬೇಕೆಂದು ಕೋರಲಾಗಿದೆ.

KSU Act 2000 Section 73,74 & 75 ಮತ್ತು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಪರೀಕ್ಷಾ ಕೈಪಿಡಿ - 2018ರ ಪ್ರಕಾರ, ಪರೀಕ್ಷೆಯ ಕೆಲಸ ಕಡ್ಡಾಯವಾಗಿದ್ದು, ಎಲ್ಲಾ ಅಧ್ಯಾಪಕರುಗಳನ್ನು ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸಲು ಸೂಚಿಸಬೇಕೆಂದು ಮತ್ತೊಮ್ಮೆ ಕೋರಲಾಗಿದೆ.

ಆದುದರಿಂದ, ದಯಮಾಡಿ ತಾವು ಈ ವಿಚಾರದಲ್ಲಿ ಸಕ್ರಿಯ ಸಹಕಾರ ನೀಡಬೇಕೆಂದು ಕೋರಿಕೆ.

12/7

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು - 560 001

ಗೆ,

ಬೆಂಗಳೂರು ನಗರ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗಗಳ ಎಲ್ಲಾ ಮುಖ್ಯಸ್ಥರು/ಕೋ-ಆರ್ಡಿನೇಟರ್‌ಗಳ ಮಾಗಿತಿಗಾಗಿ ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು, ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.

ಪ್ರತಿಗಳು:

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ವಿಧಾನ ವೀಧಿ, ಮಹಾರಾಣಿ ಕಾಲೇಜು ಎದರು, ಬೆಂಗಳೂರು - 560001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು - 560001.
3. ವೆಬ್‌ಸೈಟ್ ನಿವಾಹಕರು, ಮೇಲೆ ಹೇಳಿರುವ ಸುತ್ತೋಲೆಯನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಹಾಗೂ ಕಾಲೇಜ್ ಪೋಟ್ರಲ್‌ನಲ್ಲಿ ಅಪ್ಲೋಡ್ ಮಾಡಲು ಕೋರಲಾಗಿದೆ.